ಕರ್ನಾಟಕ ಸರ್ಕಾರ
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
5ನೇ ಮಹಡಿ, ಪ್ಲಾಟ್ ನಂ.1243, ಕೆ.ಎಸ್.ಐ.ಐ.ಡಿ.ಸಿ.ಕಟ್ಟಡ, ಐ.ಟಿ.ಪಾರ್ಕ್,
ಸೌತ್ ಬ್ಲಾಕ್, ರಾಜಾಜಿನಗರ ಇಂಡಸ್ಟ್ರೀಯಲ್ ಎಸ್ಟೇಟ್, ಬೆಂಗಳೂರು-560044
Ph : 080 22342163, 22372738 e-mail: karnregs.ombudsman@gmail.com

ಪತ್ರ ಸಂಖ್ಯೆ :ಗ್ರಾಅಪ: 598: ಉಖಾಯೋ :2025 ದಿನಾಂಕ:02.09.2025

## ಅಧಿಸೂಚನೆ

ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಅನುಷ್ಠಾನದ ಸಂಬಂಧದಲ್ಲಿ ಸ್ವೀಕೃತವಾಗುವ ದೂರುಗಳ ವಿಲೇವಾರಿ ಮತ್ತು ಕುಂದುಕೊರತೆಗಳ ನಿವಾರಣೆಗಾಗಿ ಈ ಕೆಳಕಂಡ ಜಿಲ್ಲೆಗಳಲ್ಲಿ ಓಂಬುಡ್ಸ್‌ಪರ್ಸನ್‌ರವರ ಹುದ್ದೆಗಳನ್ನು ಆಯ್ಕೆ ಮೂಲಕ ತುಂಬಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

| | |
|---|---|
| ಓಂಬುಡ್ಸ್‌ಪರ್ಸನ್ ಹುದ್ದೆ ಖಾಲಿಯಿರುವ ಜಿಲ್ಲೆಗಳು | ಚಾಮರಾಜನಗರ, ಚಿಕ್ಕಮಗಳೂರು, ದಕ್ಷಿಣ ಕನ್ನಡ ಮತ್ತು ಕಲಬುರಗಿ. |

**ಅರ್ಹತೆಗಳು:**

1. ಈ ಕೆಳಕಂಡ ಯಾವುದಾದರೊಂದು ಕ್ಷೇತ್ರದಲ್ಲಿ ಕನಿಷ್ಟ 10 ವರ್ಷಗಳ ಸೇವಾನುಭವ ಹೊಂದಿರಬೇಕಾಗಿರುತ್ತದೆ.
   ಅ) ಸಾರ್ವಜನಿಕ ಆಡಳಿತ ಆ) ಕಾನೂನು
   ಇ) ಶೈಕ್ಷಣಿಕ ಕ್ಷೇತ್ರ ಈ) ಸಮಾಜ ಸೇವೆ
   ಉ) ಮ್ಯಾನೇಜ್‌ಮೆಂಟ್
2. **ಸಾರ್ವಜನಿಕರೊಂದಿಗೆ/ಸಮುದಾಯ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸಿದ ಅನುಭವವು ಒಂದು ಕಡ್ಡಾಯ ಅರ್ಹತೆಯಾಗಿರುತ್ತದೆ.**
3. **ಅರ್ಜಿ ಸಲ್ಲಿಸುವವರು ಯಾವುದೇ ರಾಷ್ಟ್ರೀಯ / ರಾಜಕೀಯ ಪಕ್ಷದ ಮತ್ತು ನಿಷೇಧಿತ ಸಂಘ ಸಂಸ್ಥೆಯ ಸದಸ್ಯರಾಗಿರಬಾರದು.(ನೋಟರಿ ಸಲ್ಲಿಸುವುದು)**
4. ಅರ್ಜಿ ಸಲ್ಲಿಸುವವರು ಅಂಗೀಕೃತ ವಿಶ್ವ ವಿದ್ಯಾಲಯದಿಂದ ಪದವೀಧರರಾಗಿರತಕ್ಕದ್ದು.
5. ತಪಾಸಣೆ, ಕ್ಷೇತ್ರ ಭೇಟಿ, ಹಾಗೂ ವೀಕ್ಷಣೆ ಕೆಲಸಗಳಿಗೆ ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ಪ್ರವಾಸ ಕೈಗೊಳ್ಳಲು ದೈಹಿಕವಾಗಿ ಸಮರ್ಥರಾಗಿರಬೇಕು. (ವೈದ್ಯಕೀಯ ಪ್ರಮಾಣಪತ್ರ ಸಲ್ಲಿಸುವುದು)
6. ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕಕ್ಕೆ ಗರಿಷ್ಠ ವಯಸ್ಸು 66 ವರ್ಷಗಳನ್ನು ಮೀರಿರಬಾರದು.
7. ನೇಮಕಾತಿಯು ಮೊದಲಿಗೆ 2 ವರ್ಷಗಳ ಅವಧಿಯದಾಗಿರುತ್ತದೆ. ಆದರೆ ಕಾರ್ಯನಿರ್ವಹಣೆಯು ಅತೃಪ್ತಿಕರವಾಗಿ ಕಂಡು ಬಂದಲ್ಲಿ ಅವಧಿಗೆ ಮುನ್ನವೇ ಹುದ್ದೆಯಿಂದ ಬಿಡುಗಡೆ ಮಾಡಲಾಗುವುದು.
8. ಕೇಂದ್ರ/ರಾಜ್ಯ ಸರ್ಕಾರವು ಹೊರಡಿಸುವ ಆದೇಶಗಳ ಅನುಸಾರ ಸಂಭಾವನೆ, ಸಿಟ್ಟಿಂಗ್ ಫೀಜು ನೀಡಲಾಗುವುದು. ಪ್ರಸ್ತುತ ಮಾಸಿಕ ರೂ.10000/- ಗೌರವಧನ ಹಾಗೂ ಪ್ರತಿ ಸಿಟ್ಟಿಂಗ್‌ಗೆ ರೂ.2250/- ದಂತೆ ಗರಿಷ್ಠ ರೂ.45000/- ಮಿತಿಗೊಳಪಟ್ಟು ಸಿಟ್ಟಿಂಗ್ ಫೀಜು ನೀಡಲಾಗುವುದು.
9. ಸದರಿ ಹುದ್ದೆಯು ಅರೆಕಾಲಿಕ ಹುದ್ದೆಯಾಗಿರುತ್ತದೆ.

ಜಿಲ್ಲಾ ಮಟ್ಟದಲ್ಲಿ ಓಂಬುಡ್ಸ್‌ಪರ್ಸನ್‌ಗಳಾಗಿ ಕಾರ್ಯನಿರ್ವಹಿಸಲು ಆಸಕ್ತಿ ಇರುವ ವ್ಯಕ್ತಿಗಳು ಇಲಾಖೆಯ ವೆಬ್‌ಸೈಟ್ www.rdpr.karnataka.gov.in ನಲ್ಲಿ ನಿಗಧಿತ ಅರ್ಜಿ ನಮೂನೆಯನ್ನು ಅವರೋಹಣ (download) ಮಾಡಿಕೊಂಡು, ತಮ್ಮ ವ್ಯಕ್ತಿತ್ವ ಪರಿಚಯದ, ಕನಿಷ್ಠ 10 ವರ್ಷಗಳ ಕಾರ್ಯನಿರ್ವಹಣೆ ಸೇವಾನುಭವದ ಪ್ರಮಾಣಪತ್ರ ವಿವರಗಳನ್ನೊಳಗೊಂಡ ದಾಖಲೆ ಹಾಗೂ ಇತರ ಪೂರಕ ದಾಖಲೆಗಳೊಂದಿಗೆ ಅರ್ಜಿಯು ದಿನಾಂಕ:03.10.2025 ರೊಳಗೆ ತಲುಪುವಂತೆ ಖುದ್ದಾಗಿ/ಅಂಚೆ ಮೂಲಕ ಆಯುಕ್ತರು ಗ್ರಾಮೀಣಾಭಿವೃದ್ಧಿ, ಗ್ರಾಮೀಣಾಬಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, 5ನೇ ಮಹಡಿ, ಪ್ಲಾಟ್ ನಂ.1243, ಕೆ.ಎಸ್.ಐ.ಐ.ಡಿ.ಸಿ.ಕಟ್ಟಡ, ಐ.ಟಿ. ಪಾರ್ಕ್, ಸೌತ್ ಬ್ಲಾಕ್, ರಾಜಾಜಿನಗರ ಇಂಡಸ್ಟೀಯಲ್ ಎಸ್ಟೇಟ್, ಬೆಂಗಳೂರು-560010. ಇವರಿಗೆ ಸಲ್ಲಿಸುವುದು. ನಿಗಧಿ ಪಡಿಸಿದ ದಿನಾಂಕದ ನಂತರ ತಡವಾಗಿ ಸ್ವೀಕೃತವಾಗುವ ಅಥವಾ ಅಪೂರ್ಣ ಮಾಹಿತಿ ಹೊಂದಿರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. (ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 080-22342794 ಅನ್ನು ಸಂಪರ್ಕಿಸಬಹುದಾಗಿದೆ).

ಕಂಡಿಕೆ 04 ರಲ್ಲಿ ಆಯುಕ್ತರಿಂದ ಅನುಮೋದಿಸಲ್ಪಟ್ಟಿ

ಮುಖ್ಯ ಕಾರ್ಯಾಚರಣೆ ಅಧಿಕಾರಿ (ಪ್ರ)
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

Chama, chikka, kalaburagi 2025

ಭಾವಚಿತ್ರ

**ಓಂಬುಡ್ಸ್ ಪರ್ಸನ್ ನೇಮಕಾತಿಯ ಅರ್ಜಿ ನಮೂನೆ:**

| | | |
|---|---|---|
| **1** | ವೈಯಕ್ತಿಕ ಮಾಹಿತಿ ವಿವರ : | |
| 1.1 | ಹೆಸರು : | |
| 1.2 | ವಯಸ್ಸು: (-----.2025 ದಿನಾಂಕದಲ್ಲಿದ್ದಂತೆ)<br>(ಜನನ ಪ್ರಮಾಣ ಪತ್ರ / SSLC ಅಂಕಪಟ್ಟಿ ಪತ್ರ ಲಗತ್ತಿಸುವುದು) | |
| 1.3 | ಅಂಚೆ ವಿಳಾಸ ಅಥವಾ ಪತ್ರ ವ್ಯವಹಾರದ ವಿಳಾಸ: | |
| 1.4 | ಮೊಬೈಲ್ ಸಂಖ್ಯೆ ಮತ್ತು ಇ-ಮೇಲ್ ಐಡಿ: | |
| 1.5 | ಖಾಯಂ ವಿಳಾಸ :<br>(ವಾಸಸ್ಥಳದ ರುಜುವಾತು ದಾಖಲಾತಿಯನ್ನು ಲಗತ್ತಿಸುವುದು) | |
| 1.6 | ಅ) ಕ್ರಿಮಿನಲ್ ಪ್ರಕರಣದಲ್ಲಿ ಶಿಕ್ಷೆಗೊಳಗಾಗಿದ್ದೀರಾ/ಆರೋಪ ಪಟ್ಟಿ ದಾಖಲಾಗಿದೆಯೇ?<br>ಆ) ಇಲಾಖಾ ವಿಚಾರಣೆಯಲ್ಲಿ ದಂಡನೆಗೆ ಒಳಪಟ್ಟಿರುವಿರೇ?/ಯಾವುದೇ ಇಲಾಖಾ ವಿಚಾರಣೆ ಬಾಕಿ ಇದೆಯೇ?<br>ಇ) ಯಾವುದೇ ರಾಷ್ಟ್ರೀಯ / ರಾಜಕೀಯ ಪಕ್ಷದ ಸದಸ್ಯರಾಗಿರಬಾರದು.<br>ಈ) ಯಾವುದೇ ನಿಷೇಧಿತ ಸಂಘ ಸಂಸ್ಥೆಯ ಸದಸ್ಯರಾಗಿರಬಾರದು.<br>(ಪಬ್ಲಿಕ್ ನೋಟರಿಯಿಂದ ಧೃಢೀಕರಿಸಿದ ವೈಯಕ್ತಿಕ ಘೋಷಣಾ ಪ್ರಮಾಣ ಪತ್ರವನ್ನು ಲಗತ್ತಿಸುವುದು) | |
| 1.7 | ಯಾವುದೇ ಸಂದರ್ಭದಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಹೊಣೆಗಾರಿಕೆ ಹೊಂದಿರುವಿರಾ? | |
| **2** | ವೃತ್ತಿಪರ ಮಾಹಿತಿ ವಿವರ:<br>(ಮಾಹಿತಿಗೆ ಸಂಬಂಧಿಸಿದ ಪ್ರಮಾಣ ಪತ್ರ ಮತ್ತು ದಾಖಲೆಗಳನ್ನು ಲಗತ್ತಿಸುವುದು) | |
| 2.1 | ಉನ್ನತ ವಿದ್ಯಾರ್ಹತೆ :<br>(ಕನಿಷ್ಠ ವಿದ್ಯಾರ್ಹತೆ: ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಪದವೀಧರರಾಗಿರತಕ್ಕದ್ದು)<br>(ಅಧಿಕೃತ ಪ್ರಮಾಣ ಪತ್ರವನ್ನು ಲಗತ್ತಿಸುವುದು). | |
| 2.2 | ಎಷ್ಟು ವರ್ಷಗಳ ಕೆಲಸದ ಅನುಭವವಿದೆ: ಪ್ರಮಾಣ ಪತ್ರಗಳ ವಿವರ ನೀಡುವುದು | |
| 2.3 | ಕ್ಷೇತ್ರ ಮಟ್ಟದ ಅನುಭವ: ಈ ಕೆಳಕಂಡ ಯಾವುದಾದರು ಒಂದು ಕ್ಷೇತ್ರದಲ್ಲಿ ಕನಿಷ್ಠ 10 ವರ್ಷಗಳು ಕಾರ್ಯನಿರ್ವಹಿಸಿರುವ ಅನುಭವ ಇರತಕ್ಕದ್ದು. ಈ ಕುರಿತು ವಿವರವಾದ ಟಿಪ್ಪಣಿ ಹಾಗೂ ಕಾರ್ಯನಿರ್ವಹಿಸಿದ ಅನುಭವಕ್ಕೆ ಸಂಬಂಧಿಸಿದ ಪ್ರಮಾಣ ಪತ್ರ ವಿವರಗಳನ್ನು ನೀಡುವುದು.<br>(ಅ) ಸಾರ್ವಜನಿಕ ಆಡಳಿತ<br>(ಆ) ಕಾನೂನು<br>(ಇ) ಶೈಕ್ಷಣಿಕ ಸೇವೆ<br>(ಈ) ಸಮಾಜ ಸೇವೆ<br>(ಉ)ಮ್ಯಾನೇಜ್‌ಮೆಂಟ್ | |
| **3** | ಈ ಹಿಂದೆ ಕಾರ್ಯ ನಿರ್ವಹಿಸಿದ್ದ ಗರಿಷ್ಠ ಹುದ್ದೆ/ಸ್ಥಾನ /ಶ್ರೇಣಿ : | |
| **4** | ಯಾವುದಾದರೂ ಸೊಸೈಟಿ/ವೃತ್ತಿಕಾಯ ಸಂಸ್ಥೆಯ ಸದಸ್ಯರೇ? | ಹೌದಾದಲ್ಲಿ ವಿವರಗಳನ್ನು ನೀಡುವುದು: |
| **5** | ನೇಮಕಾತಿ ಬಯಸುವ ಜಿಲ್ಲೆ: (ಆದ್ಯತೆ ನಮೂದಿಸುವುದು) | 1) 2) 3) |
| | ***ಸಮಿತಿಯ ನಿರ್ಣಯವೇ ಅಂತಿಮ** | |

**ಸ್ವಯಂ ಘೋಷಣೆ:**

ಮೇಲೆ ಸಲ್ಲಿಸಿರುವ ಮಾಹಿತಿಯು ಸರಿಯಾಗಿದೆಯೆಂದು ಹಾಗೂ ಅಧಿನಿಯಮದ ಮಿತಿಯೊಳಗೆ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಕುರಿತು ಕೇಂದ್ರ ಸರ್ಕಾರವು ಕಾಲಕಾಲಕ್ಕೆ ಹೊರಡಿಸಿದ ಕಾರ್ಯಾಚರಣೆಯ ಮಾರ್ಗಸೂಚಿಗಳನ್ವಯ ರೂಪಿಸಿರುವ ಪ್ರಕಾರ್ಯಗಳನ್ನು ಹಾಗೂ ಓಂಬುಡ್ಸ್‌ಪರ್ಸನ್ ನೇಮಕಾತಿಗೆ ಕುರಿತು ಹೊರಡಿಸಿರುವ ಅಧಿಸೂಚನೆ, ಜಾಹಿರಾತು ಮೂಲಕ ನೀಡಿರುವ ಸೂಚನೆಗಳನ್ನು ಮತ್ತು ಓಂಬುಡ್ಸ್‌ಪರ್ಸನ್ ಹುದ್ದೆಯು ಅರೆಕಾಲಿಕ ಹುದ್ದೆಯಾಗಿದೆ ಎಂಬುದನ್ನು ಪೂರ್ಣವಾಗಿ ಅರ್ಥೈಸಿಕೊಂಡಿರುವೆನೆಂದು ಈ ಮೂಲಕ ಘೋಷಿಸಿರುತ್ತೇನೆ.

ದಿನಾಂಕ:

ಸ್ಥಳ:

ಅರ್ಜಿದಾರರ ಹೆಸರು ಮತ್ತು ಸಹಿ: